ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕೊಡಗು ಜಿಲ್ಲೆಯಲ್ಲಿ ವನ್ಯಜೀವಿ-ಮಾನವ ಸಂಘರ್ಷ ಕುರಿತು

ಶ್ರೀಮತಿ ಎಸ್.ವೀಣಾಅಚ್ಚಯ್ಯ(ವಿಧಾನಸಭೆಯಿಂದಚುನಾಯಿತರಾದವರು):-

142 (127) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಹುಲಿ, ಚಿರತೆ ಕಾಡುಹಂದಿ ಸೇರಿದಂತೆ ವನ್ಯಜೀವಿಗಳ ಉಪಟಳ ಹೆಚ್ಚುತ್ತಲೇ ಇದ್ದು, ರೈತರಿಗೆ ಹಾಗೂ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ವನ್ಯಜೀವಿ-ಮಾನವ ಸಂಘರ್ಷ ತಪ್ಪಿಸಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಈ ರೀತಿ ವನ್ಯಜೀವಿಗಳ ಉಪಟಳ ಸತತವಾಗಿ ಹೆಚ್ಚುತ್ತಲೇ ಇರುವುದಕ್ಕೆ ಸರ್ಕಾರ ಗುರುತಿಸಿರುವ ವೈಜ್ಞಾನಿಕ ಕಾರಣಗಳೇನು;

(ಈ) ಈ ರೀತಿ ಗುರುತಿಸಿರುವ ವೈಜ್ಞಾನಿಕ ಕಾರಣಗಳನ್ನು ಗಮನದಲ್ಲಿ ಇಟ್ಟುಕೊಂಡು ಸರ್ಕಾರ ರೂಪಿಸಿರುವ ಶಾಶ್ವತ ಪರಿಹಾರ ಕ್ರಮಗಳೇನು ?